ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 01–10–2021

# ಮಾಧ್ಯಮ ಆಹ್ವಾನ
# Media Invitation

**ಸ್ವಾತಂತ್ರ್ಯೋತ್ಸವ 75 ಅಮೃತ ಮಹೋತ್ಸವ ವರ್ಷಾಚರಣೆ, ಮಹಾತ್ಮ ಗಾಂಧೀಜಿ ಅವರ ಜನ್ಮದಿನಾಚರಣೆ ಹಾಗೂ ಕರ್ನಾಟಕ ಸರ್ಕಾರದ ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ ಪ್ರದಾನ ಸಮಾರಂಭ:**

ಪ್ರಶಸ್ತಿ ಪ್ರದಾನ:
ಬಸವರಾಜ ಎಸ್ ಬೊಮ್ಮಾಯಿ
ಸನ್ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.

ಮುಖ್ಯ ಅತಿಥಿಗಳು:
ನಾಡೋಜ ಡಾ. ವೂಡೇ ಪಿ. ಕೃಷ್ಣ,
ಅಧ್ಯಕ್ಷರು, ಕರ್ನಾಟಕ ಗಾಂಧಿ ಸ್ಮಾರಕ ನಿಧಿ.

ಗೌರವ ಉಪಸ್ಥಿತಿ:
ಕರ್ನಾಟಕ ಉಚ್ಛ ನ್ಯಾಯಲದ ವಿಶ್ರಾಂತ ನ್ಯಾಯಮೂರ್ತಿ ಶ್ರೀ ಅಶೋಕ್ ಬಂಗಾರೆಪ್ಪ ಹಿಂಚಿಗೇರಿ,

ಪ್ರಶಸ್ತಿ ಪುರಸ್ಕೃತರು:
1. ಶ್ರೀ ಸಿದ್ಧಗಂಗಾ ಮಠದ ಪರವಾಗಿ ಪೂಜ್ಯಶ್ರೀ ಸಿದ್ಧಲಿಂಗ ಮಹಾಸ್ವಾಮಿಗಳು
ಶ್ರೀ ಸಿದ್ಧಗಂಗಾ ಶಿಕ್ಷಣ ಸಂಸ್ಥೆ, ತುಮಕೂರು.

2.ಶ್ರೀಮತಿ ಮೀರಾತಾಯಿ ಕೊಪ್ಪಿಕರ್
ಗಾಂಧಿ ಮತ್ತು ವಿನೋಬಾ ಅನುಯಾಯಿ, ವಾತ್ಸಲ್ಯ ಧಾಮ ಆಶ್ರಮ ಟ್ರಸ್ಟ್, ಮುಧೋಳ.

ದಿನಾಂಕ: 02–10–2021 ಶನಿವಾರ, ಸಮಯ: ಬೆಳಿಗ್ಗೆ 11.00 ಗಂಟೆಗೆ

ಸ್ಥಳ: ಮಹಾದೇವ ದೇಸಾಯಿ ಸಭಾಂಗಣ, 2ನೇ ಮಹಡಿ, ಗಾಂಧಿ ಭವನ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

**PRESS RELEASE**

## "ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ – ಕರ್ನಾಟಕ" ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಅಕ್ಟೋಬರ್, 01 (ಕರ್ನಾಟಕ ವಾರ್ತೆ):

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯನ್ನು ಸರ್ಕಾರಿ ಕಾರ್ಯಕ್ರಮವನ್ನಾಗಿ ರಾಜ್ಯಾದ್ಯಂತ ಅರ್ಥಪೂರ್ಣವಾಗಿ ಆಚರಿಸಲು ಗಾಂಧೀ ತತ್ವಾದರ್ಶಗಳನ್ನು ಆಧರಿಸಿಕೊಂಡು ಸಮಾಜದಲ್ಲಿ ಗಣನೀಯ ಸೇವೆ ಮಾಡಿದ ಗಣ್ಯರನ್ನು ಗುರುತಿಸಿ ಗೌರವಿಸಲು ಕರ್ನಾಟಕ ಸರ್ಕಾರ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ನೀಡುವ **"ಮಹಾತ್ಮ ಗಾಂಧಿ ಸೇವಾ ಪ್ರಶಸ್ತಿ–ಕರ್ನಾಟಕ"** ಕೊಡಮಾಡುತ್ತಾ ಬಂದಿದೆ.

ಕೋವಿಡ್– 19ರ ಹಿನ್ನಲೆಯಲ್ಲಿ ಕಳೆದ ವರ್ಷದ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಏರ್ಪಡಿಸಿರಲಿಲ್ಲ. ಈ ವರ್ಷ ಕೋವಿಡ್ ಪ್ರಕರಣಗಳು ಕಡಿಮೆಯಾಗುತ್ತಾ ಬಂದಿರುವ ಹಿನ್ನೆಲೆಯಲ್ಲಿ, ಸರ್ಕಾರವು ಸದರಿ ಪ್ರಶಸ್ತಿಗಳನ್ನು ಪ್ರದಾನ ಮಾಡಲು ಇಚ್ಚಿಸಿದ್ದು, ಪ್ರಶಸ್ತಿಗೆ ಅರ್ಹರನ್ನು ಆಯ್ಕೆ ಮಾಡಲು ಕರ್ನಾಟಕ ಉಚ್ಚ ನ್ಯಾಯಾಲಯದ ವಿಶ್ರಾಂತ ನ್ಯಾಯಮೂರ್ತಿ ಶ್ರೀ ಅಶೋಕ್ ಬಂಗಾರೆಪ್ಪಾ ಹಿಂಚಿಗೇರಿ ಇವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು. ಆಯ್ಕೆ ಸಮಿತಿಯು 2020 ರ ಸಾಲಿಗೆ ಬಾಗಲಕೋಟೆ ಜಿಲ್ಲೆಯ ಸ್ವಾತಂತ್ರ್ಯ ಹೋರಾಟಗಾರರಾದ **"ಶ್ರೀಮತಿ ಮೀರಾಬಾಯಿ ಕೊಪ್ಪಿಕರ್"** ಮತ್ತು 2021 ನೇ ಸಾಲಿಗೆ **"ಶ್ರೀ ಸಿದ್ಧಗಂಗಾ ಶಿಕ್ಷಣ ಸಂಸ್ಥೆ ಹಾಗೂ ಶ್ರೀ ಸಿದ್ಧಗಂಗಾ ಮಠ"**ವನ್ನು ಪ್ರಶಸ್ತಿಗೆ ಆಯ್ಕೆ ಮಾಡಿರುತ್ತದೆ.

ಅಕ್ಟೋಬರ್ 2 ರಂದು ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಜಯಂತಿಯಂದು ಬೆಂಗಳೂರಿನ ಗಾಂಧೀ ಭವನದ ಮಹಾದೇವ ದೇಸಾಯಿ ಸಭಾಂಗಣದಲ್ಲಿ ಹಮ್ಮಿಕೊಂಡಿರುವ ಕಾರ್ಯಕ್ರಮದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಪ್ರಶಸ್ತಿ ಪುರಸ್ಕೃತರಿಗೆ ಪ್ರಶಸ್ತಿಗಳನ್ನು ಪ್ರದಾನ ಮಾಡಲಿರುವರು. ಪ್ರಶಸ್ತಿಯು ತಲಾ ಐದು ಲಕ್ಷ ರೂ ನಗದು ಪುರಸ್ಕಾರ ಹಾಗೂ ಸ್ಮರಣಿಕೆಯನ್ನು ಒಳಗೊಂಡಿರುತ್ತದೆ.

## ಹಿರಿಯ ನಾಗರಿಕರು ಅನುಭವದ ಕಳಶವಿದ್ದಂತೆ–ಮುಖ್ಯಮಂತ್ರಿ ಬಸವರಾಜ ಎಂ ಬೊಮ್ಮಾಯಿ

ಬೆಂಗಳೂರು, ಅಕ್ಟೋಬರ್ 01 (ಕರ್ನಾಟಕ ಸರ್ಕಾರ):

ಯಾವುದೇ ಕ್ಷೇತ್ರಲ್ಲಿಯೇ ಅಗಲಿ ಹಿರಿಯ ನಾಗರಿಕರು ಅಪಾರವಾದ ಅನುಭವವನ್ನು ಗಳಿಸಿರುತ್ತಾರೆ, ಕೃಷಿ, ಸಾಮಾಜಿಕ, ಶಿಕ್ಷಣ, ವಿಜ್ಞಾನ ಮುಂತಾದ ಕ್ಷೇತ್ರಗಳಲ್ಲಿ ಅವರು ಅಪಾರವಾದ ಅನುಭವವನ್ನು ಗಳಿಸಿರುತ್ತಾರೆ ಅವರ ಸೇವೆಯನ್ನು ನಾವು ಪಡೆದುಕೋಳ್ಳಬೇಕೇ ವಿನಃ ಅವರನ್ನು ಕಡೆಗಣಿಸಬಾರದು. ಹಿರಿಯ ನಾಗರಿಕರ ಅನುಭವ ಅಪಾರವಾದದ್ದು. ಅವರ ಅನುಭವವು ಸಾಮಾಜಿಕ ಮೌಲ್ಯಗಳನ್ನು ಹೆಚ್ಚಿಸಲು, ಉತ್ತಮ ಸಂಬಂಧವನ್ನು ಬೆಳೆಸಲು ಸದ್ಬಳಕೆಯಾಗಬೇಕು ಎಂದು ಮುಖ್ಯಮಂತ್ರಿ ಬಸವರಾಜ ಎಂ ಬೊಮ್ಮಾಯಿ ಅವರು ತಿಳಿಸಿದರು.

ಇಂದು ರವೀಂದ್ರ ಕಲಾಕ್ಷೇತ್ರದಲ್ಲಿ ಹಮ್ಮಿಕೊಂಡಿದ್ದ ವಿಶ್ವ ಹಿರಿಯ ನಾಗರೀಕರ ದಿನಾಚರಣೆ ಅಂಗವಾಗಿ ಹಿರಿಯ ನಾಗರಿಕರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಮುಖ್ಯಮಂತ್ರಿಗಳು, ಹಿರಿತನ ಒಂದು ಸ್ಥಿತಿ. ಹಿರಿತನವು ಅನುಭವದಿಂದ, ವಯಸ್ಸಿನಿಂದ, ನಡವಳಿಕೆಯಿಂದ, ನಮ್ಮ ಬದುಕು ನಡೆಸುವ ರೀತಿಯಲ್ಲಿ ತೀರ್ಮಾನವಾಗಿರುತ್ತದೆ. ನಾವು ಮಾನಸಿಕವಾಗಿ ಗಟ್ಟಿಯಿದ್ದರೆ ಸಮಾಜಕ್ಕೆ ಕೊಡುಗೆ ನೀಡಬಹುದೆಂಬ ಮನಸ್ಥಿತಿಯಿದ್ದರೆ ಹಿರಿತನದ ವಯಸ್ಸನ್ನು ಅರ್ಥಪೂರ್ಣವಾಗಿ ಕಳೆಯಲು ಸಾಧ್ಯವಿದೆ. ಸರ್ಕಾರ, ಸಮಾಜ, ವ್ಯವಸ್ಥೆ, ಕುಟುಂಬವೆಂಬ ನಾಲ್ಕು ಸ್ತಂಭಗಳು ಹಿರಿಯ ಜೀವಗಳಿಗೆ ಆಶ್ರಯ ನೀಡುವಂತಹುದು.

ಆಗ ಮಾತ್ರ ಹಿರಿಯರು ಸಂತೋಷವಾಗಿ ಸುರಕ್ಷಿತವಾಗಿ ಆರೋಗ್ಯವಂತರಾಗಿ ಬದುಕು ನಡೆಸಲು ಸಾಧ್ಯವೆಂದು ಮುಖ್ಯಮಂತ್ರಿಗಳು ತಿಳಿಸಿದರು.

ನಮ್ಮ ಬದುಕಿನಲ್ಲಿ ನಾವು ಎಲ್ಲವನ್ನು ನಿಯಂತ್ರಣ ಮಾಡುತ್ತೇವೆ ಎಂದು ಹೇಳುವುದು ತಪ್ಪಾಗಿದೆ. ಯಾವುದೂ ನಮ್ಮ ನಿಯಂತ್ರಣದಲ್ಲಿ ಇರುವುದಿಲ್ಲ. ನಿಸರ್ಗ, ಸಾಮಾಜಿಕ ವ್ಯವಸ್ಥೆ ಕುಟುಂಬದ ಸದಸ್ಯರು, ನಮ್ಮ ಮಕ್ಕಳೂ ಕೂಡ ನಮ್ಮ ನಿಯಂತ್ರಣದಲ್ಲಿ ಇರುವುದಿಲ್ಲ. ನಾವು ಸೋಲು ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಸಂತೃಪ್ತಿಯ ಜೀವನವನ್ನು ನಡೆಸಬೇಕು. ಆತ್ಮಚೈತನ್ಯವನ್ನು ಸದಾಕಾಲ ಜೀವಂತವಾಗಿ ಇರಿಸಿಕೊಳ್ಳಬೇಕು ಎಂದು ಹೇಳಿದರು.

ಇದೇ ಸಮಯದಲ್ಲಿ ಹಿರಿಯ ನಾಗರೀಕರ ವಿವಿಧ ಕ್ಷೇತ್ರದಿಂದ ಆಯ್ಕೆಯಾಗಿರುವ ಹಾವೇರಿಯ ಶ್ರೀ ಗುರುಪಾದಪ್ಪ ಅಂಚೇರ, ಶಿಕ್ಷಣ ಕ್ಷೇತ್ರ, ಬಾಗಲಕೋಟೆಯ ಡಾ. ಕರವೀರಪ್ರಭು ಕ್ಯಾಲಕೊಂಡ, ಸಾಹಿತ್ಯ ಕ್ಷೇತ್ರ, ರಾಯಚೂರಿನ ಶ್ರೀ ಶರಣಪ್ಪ ಗೋನಾಳ, ಕಲಾ ಕ್ಷೇತ್ರ, ಉಡುಪಿಯ ಶ್ರೀ ಎಸ್. ಜನಾರ್ದನ, ಸಮಾಜ ಸೇವೆ ಕ್ಷೇತ್ರ, ಕೋಲಾರದ ಶ್ರೀ ಅಂಚೆ ಅಶ್ವತ್ಥ, ಪ್ರತಿಭೆ/ಕ್ರೀಡಾ ಕ್ಷೇತ್ರ, ಕೊಪ್ಪಳದ ಶ್ರೀ. ಬಿ. ಕಿಷನ್ ರಾವ್, ಕಾನೂನು ಕ್ಷೇತ್ರ ಹಾಗೂ ಬೀದರ್ ಜಿಲ್ಲೆಯ ಡಾ॥ ಬಿ.ಆರ್.ಅಂಬೇಡ್ಕರ್ ಕಲ್ಚರಲ್ ಅಂಡ್ ವೆಲ್ಫೇರ್ ಸೊಸೈಟಿ, ಸಂಸ್ಥೆಗೆ ಪ್ರಶಸ್ತಿ ಪ್ರದಾನ, ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರ ನೀಡಿ ಗೌರವಿಸಲಾಯಿತು.

ಅದೇ ರೀತಿ ರಾಜ್ಯದ 4 ಕಂದಾಯ ವಿಭಾಗಗಳಲ್ಲಿ ಒಂದು ವಿಭಾಗಕ್ಕೆ ಒಬ್ಬರಂತೆ ಬೆಂಗಳೂರು ವಿಭಾಗದಿಂದ ಕನ್ನಡ ಗಣಕ ಪರಿಷತ್ – ವಾಗಾಕ್ಷರ ತಂತ್ರಜ್ಞಾನ ಅಭಿವೃದ್ಧಿಗೆ ಸಹಕರಿಸಿದ, ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಜಿ.ಎನ್.ನರಸಿಂಹಮೂರ್ತಿ, ಮೈಸೂರು ವಿಭಾಗದಿಂದ ಹಾಸನದ ನೃತ್ಯ ಹಾಗೂ ಸಂಗೀತ ಕಲಾವಿದರಾದ ಶ್ರೀಮತಿ ಉಷಾ ದಾತಾರ, ಬೆಳಗಾವಿ ವಿಭಾಗದಿಂದ ಬಾಗಲಕೋಟೆ ಜಿಲ್ಲೆ ಜಮಖಂಡಿಯ ಪಶುಶುಶ್ರೂಷಕರಾದ ಡಾ॥ ಹನುಮಂತಪ್ಪ ಭೀಮಪ್ಪ ಗಲಗಲಿ ಹಾಗೂ ಕಲಬುರಗಿ ವಿಭಾಗದಿಂದ ಕೊಪ್ಪಳ ಜಿಲ್ಲೆಯ ತೊಗಲುಗೊಂಬೆ ಕಲಾವಿದರಾದ ಶ್ರೀಮತಿ ಭೀಮವ್ವ ದೊಡ್ಡಬಾಳಪ್ಪ ಶಿಳ್ಳೇಕ್ಯಾತರ ಹೀಗೆ ಒಟ್ಟು 04 ವಿಶೇಷ ಸಾಧಕರನ್ನು ಸನ್ಮಾನಿಸಲಾಯಿತು.

ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಸಚಿವ ಆಚಾರ ಹಾಲಪ್ಪ ಬಸಪ್ಪ ಅವರು ಪ್ರಾಸ್ತಾವಿಕ ಭಾಷಣ ಮಾಡಿದರು. “ರಾಷ್ಟ್ರೀಯ ಹಿರಿಯ ನಾಗರಿಕರ ಸಹಾಯವಾಣಿ” ಯು ಉನ್ನತ ತಾಂತ್ರಿಕತೆಯನ್ನು ಬಳಸಿಕೊಂಡು ಹಿರಿಯ ನಾಗರಿಕರಿಗೆ ಶೀಘ್ರವಾಗಿ ಸೇವೆಯನ್ನು ನೀಡುವ ಉದ್ದೇಶವನ್ನು ಹೊಂದಿದೆ. ಈ ಸಹಾಯವಾಣಿಯನ್ನು ಕೇಂದ್ರ ಸರ್ಕಾರದ ಅನುದಾನದೊಂದಿಗೆ ನೈಟಿಂಗೇಲ್ ಮೆಡಿಕಲ್ ಟ್ರಸ್ಟ್, ಬೆಂಗಳೂರು ಈ ಸಂಸ್ಥೆಯ ಮೂಲಕ ನಿರ್ವಹಿಸಲಾಗುತ್ತಿದೆ ಎಂದು ಸಚಿವರು ತಿಳಿಸಿದರು

ರಾಷ್ಟ್ರೀಯ ಹಿರಿಯ ನಾಗರಿಕರ ಸಹಾಯವಾಣಿಯ ಟೋಲ್ ಫ್ರೀ ಸಂಖ್ಯೆ 14567ಯಾಗಿದ್ದು ಹಿರಿಯ ನಾಗರಿಕರಿಗೆ “ಮನೆ ಆರೈಕೆ” ಸೇವೆಗಳ ಬಗ್ಗೆ ಆಸ್ಪತ್ರೆ ಮತ್ತು ಹಿರಿಯರ ಆರೈಕೆಯ ಸೌಲಭ್ಯಗಳ ಬಗ್ಗೆ, ವೃದ್ಧಶ್ರಮಗಳ ಬಗ್ಗೆ ಮತ್ತು ಕೋವಿಡ್ ಸಂಬಂಧಿತ ಮಾಹಿತಿಗಳು ಸೇರಿದಂತೆ ಇನ್ನಿತರ ಅಗತ್ಯ ಸೇವೆ ಸೌಲಭ್ಯಗಳ ಬಗ್ಗೆ ಮಾಹಿತಿಯನ್ನು ನೀಡುತ್ತದೆ ಎಂದು ಸಚಿವರು ನುಡಿದರು.

ಕಾರ್ಯಕ್ರಮದಲ್ಲಿ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆ ರಾಜ್ಯ ಸಚಿವರಾದ ಎ. ನಾರಾಯಣಸ್ವಾಮಿ, ಜಲಸಂಪನ್ಮೂಲ ಸಚಿವ ಗೋವಿಂದ ಎಂ ಕಾರಜೋಳ, ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರ ಶಾಸಕ ಡಾ.ಉದಯ್ ಬಿ. ಗರುಡಾಚಾರ್, ಮಹಿಳ ಮತು ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರು ಹಾಗೂ ಹಿರಿಯೂರು ವಿಧಾನಸಭಾ ಕ್ಷೇತ್ರದ ಶಾಸಕರಾದ ಶ್ರೀಮತಿ ಕೆ ಪೂರ್ಣಿಮ ಅವರು ಗಣ್ಯರು ಉಪಸ್ಥಿತರಿದ್ದರು.

# ಅಕ್ಟೋಬರ್ 2 ರಂದು 'ಸ್ವಚ್ಛತಾ ಶ್ರಮದಾನ' ಕಾರ್ಯಕ್ರಮ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ಗಾಂಧೀಜಿಯವರ ಸ್ವಚ್ಛ ಮತ್ತು ಆರೋಗ್ಯಕರ ಭಾರತದ ಕನಸು ಹಾಗೂ ಸನ್ಮಾನ್ಯ ಪ್ರಧಾನಿ ಮೋದಿಜೀಯವರ ಆಶಯದ ಹಿನ್ನೆಲೆಯಲ್ಲಿ, ಸ್ವಚ್ಛತೆ – ನೈರ್ಮಲ್ಯದ ಹಾಗೂ ಕೆಳಸ್ತರದಲ್ಲಿ ನೈರ್ಮಲ್ಯದ ಮೂಲಕ ವಿದ್ಯಾರ್ಥಿಗಳು –ಜನರು– ಸಮಾಜದ ಒಳಗೊಳ್ಳುವಿಕೆಗೆ ಉತ್ತೇಜನ ನೀಡಿ ಅರಿವು ಮೂಡಿಸುವ ಉದ್ದೇಶದಿಂದ, ನಮ್ಮ ಇಲಾಖೆಯ ಪ್ರತಿಯೊಂದು ಕಛೇರಿ, ಹಾಸ್ಟೆಲ್, ವಸತಿಶಾಲೆಗಳಲ್ಲಿ ಅಕ್ಟೋಬರ್ 2ರ ಗಾಂಧೀ ಜಯಂತಿಯಂದು 'ಸ್ವಚ್ಛತಾ ಶ್ರಮದಾನ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ಸಮಾಜಕಲ್ಯಾಣ ಇಲಾಖೆಯ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಕಛೇರಿಗಳು, ವಿದ್ಯಾರ್ಥಿ ನಿಲಯಗಳು ಮತ್ತು ವಸತಿ ಶಾಲೆಗಳಲ್ಲಿ 'ಸ್ವಚ್ಛತಾ ಶ್ರಮದಾನ' ಕಾರ್ಯಕ್ರಮವನ್ನು ನಡೆಸಲಾಗುತ್ತದೆ.

ಮಹಾತ್ಮ ಗಾಂಧೀಜಿಯವರು ತಮ್ಮ ಜೀವನದುದ್ದಕ್ಕೂ ಅಹಿಂಸೆಯ ಜೊತೆ ಜೊತೆಗೆ ಸ್ವಚ್ಛತೆ ಹಾಗೂ ನೈರ್ಮಲ್ಯೀಕರಣಕ್ಕೆ ಅತೀ ಹೆಚ್ಚಿನ ಪ್ರಾಮುಖ್ಯತೆ ನೀಡುತ್ತಿದ್ದರು. ಸ್ವಚ್ಛತೆ – ನೈರ್ಮಲ್ಯೀಕರಣ ಒಂದು ಅಭಿಯಾನಕ್ಕಾಗಿ ದೇಶದಾದ್ಯಂತ ಜನರಲ್ಲಿ ಅರಿವು ಮೂಡಿಸುವುದು ಹಾಗೂ ಸ್ವಚ್ಛತಾ ಕ್ರಮಗಳನ್ನು ದೈನಂದಿನ ಜೀವನದಲ್ಲಿ ಅನುಸರಿಸುವುದು ಅವಶ್ಯವಾಗಿದೆ.

2014ರ ಅಕ್ಟೋಬರ್ 2ರ ಗಾಂಧಿ ಜಯಂತಿಯಂದು ದೇಶದ ಪ್ರದಾನ ಮಂತ್ರಿಯವರಾದ ಸನ್ಮಾನ್ಯ ನರೇಂದ್ರ ಮೋದಿಯವರು ಸ್ವತಃ ರಸ್ತೆಯನ್ನು ಸ್ವಚ್ಛಗೊಳಿಸುವ ಮೂಲಕ ಸ್ವಚ್ಛ ಭಾರತ್ ಅಭಿಯಾನಕ್ಕೆ ಚಾಲನೆ ನೀಡುವುದರೊಂದಿಗೆ, ದೇಶದ ಜನರಲ್ಲಿ ಸಮುದಾಯದ ನೈರ್ಮಲ್ಯೀಕರಣದ ಬಗ್ಗೆ ಪ್ರಭಾವ ಬೀರಿದರು.

ತದನಂತರ, ಸ್ವಚ್ಛ ಭಾರತ ಅಭಿಯಾನದ ಮುಂದುವರೆದ ಭಾಗವಾಗಿ "ಸ್ವಚ್ಛತೆಯ ಸೇವೆ" (ಸ್ವಚ್ಛತಾ ಹೀ ಸೇವಾ) ಅಭಿಯಾನಕ್ಕೆ ಕರೆ ನೀಡಿದರು.

ಎರಡು ಇಲಾಖೆಗಳ ವ್ಯಾಪ್ತಿಯಲ್ಲಿ 2537 ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳು, 3072 ಮೆಟ್ರಿಕ್ ನಂತರದ ವಿದ್ಯಾರ್ಥೀನಿಲಯಗಳು, 84 ಆಶ್ರಮ ಶಾಲೆಗಳು, 826 ವಸತಿ ಶಾಲೆಗಳಿದ್ದು, ಸದರಿ ವಿದ್ಯಾರ್ಥಿನಿಲಯ/ ಶಾಲೆಗಳಲ್ಲಿ ಪ್ರಸ್ತುತ ಸುಮಾರು 3,42,000 ವಿದ್ಯಾರ್ಥಿಗಳು ದಾಖಲಾತಿ ಹೊಂದಿದ್ದು, ಈ ಎಲ್ಲಾ ವಿದ್ಯಾರ್ಥಿಗಳು ಹಾಗೂ 42,000 ಇಲಾಖಾ ಸಿಬ್ಬಂದಿಗಳು ಈ ಬೃಹತ್ ಸ್ವಚ್ಛತಾ ಶ್ರಮದಾನ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

ಜಿಲ್ಲೆಗೆ ಒಬ್ಬರು ನೋಡಲ್ (ರಾಜ್ಯ ಮಟ್ಟದ) ಅಧಿಕಾರಿಯನ್ನು ನೇಮಿಸಿ, ಕಾರ್ಯಕ್ರಮ ಅನುಷ್ಠಾನದ ಜವಾಬ್ದಾರಿ ನೀಡಲಾಗಿದೆ. ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿಗಳು, ಆಯುಕ್ತರು, ಸೇರಿದಂತೆ ಎಲ್ಲಾ ರಾಜ್ಯ ಮಟ್ಟದ ಅಧಿಕಾರಿಗಳು, ಒಂದೊಂದು ಜಿಲ್ಲಾ – ತಾಲ್ಲೂಕು ಹಾಸ್ಟೆಲ್ – ವಸತಿ ಶಾಲೆಯಲ್ಲಿ ಉಪಸ್ಥಿತರಿದ್ದು ಸ್ವಚ್ಛತಾ ಶ್ರಮದಾನದಲ್ಲಿ ಭಾಗವಹಿಸಲಿದ್ದಾರೆ.

ಇದೊಂದು ಬೃಹತ್ ಸ್ವಚ್ಛತಾ ಆಂದೋಲನವಾಗಿದ್ದು, ನಮ್ಮ ಗ್ರಾಮ, ನಗರ ಹಾಗೂ ಪರಿಸರವನ್ನು ಸ್ವಚ್ಛವಾಗಿಡುವ ಹಾಗೂ ಕಸ ಮುಕ್ತಗೊಳಿಸುವ ನಿಟ್ಟಿನಲ್ಲಿ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗಳಿಂದ ಒಂದು ಪ್ರಯತ್ನವಾಗಿದೆ ಹಾಗೂ ಸಾರ್ವಜನಿಕರಲ್ಲಿ ಸ್ವಚ್ಚತೆಯ ಕುರಿತು ಜಾಗೃತಿ ಮೂಡಿಸುವಲ್ಲಿ ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿಯವರ ಕನಸಿನ ಸ್ವಚ್ಛ ಭಾರತದ ಕಲ್ಪನೆಯನ್ನು ಸಾಕಾರಗೊಳಿಸುವಲ್ಲಿ ಒಂದು ಹೆಜ್ಜೆಯಾಗಿದೆ.

## ರಾಜಭವನದಲ್ಲಿ ಗಾಂಧೀ ಜಯಂತಿ ಆಚರಣೆ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ಭಾರತ ಸ್ವಾತಂತ್ರೋತ್ಸವದ ಅಮೃತ ಮಹೋತ್ಸವದ ಅಂಗವಾಗಿ ಈ ಬಾರಿಯ ಗಾಂಧೀ ಜಯಂತಿಯನ್ನು ರಾಜಭವನದಲ್ಲಿ ಹಲವು ಸಂಘ ಸಂಸ್ಥೆಗಳು ಹಾಗೂ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಇಲಾಖೆಗಳ ಸಹಯೋಗದಲ್ಲಿ ವಿಶೇಷವಾಗಿ ಹಮ್ಮಿಕೊಳ್ಳಲಾಗಿದೆ.

ನಾಳೆ ರಾಜಭವನದ ಗಾಜಿನ ಮನೆಯಲ್ಲಿ ಸಂಜೆ 5.30 ರಿಂದ 7.30ರವರೆಗೆ ಹಮ್ಮಿಕೊಂಡಿರುವ ಈ ವಿಶೇಷ ಕಾರ್ಯಕ್ರಮವನ್ನು ರಾಜ್ಯಪಾಲರಾದ ಥಾವರ್‌ಚಂದ್ ಗೆಹ್ಲೋಟ್ ಅವರು ಉದ್ಘಾಟಿಸಲಿದ್ದು, ಗಾಂಧಿ ಭಜನೆ, ದೇಶಭಕ್ತಿ ಗೀತೆ ಸೇರಿದಂತೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಕಾರ್ಯಕ್ರಮದಲ್ಲಿ ಇಂಡಿಯನ್ ಕೌನ್ಸಿಲ್ ಫಾರ್ ಕಲ್ಚರಲ್ ರಿಲೇಷನ್ಸ್ ಸಂಸ್ಥೆಯ ಬೆಂಗಳೂರು ವಿಭಾಗದ ಮುಖ್ಯಸ್ಥರಾದ ಪಿ.ವೇಣುಗೋಪಾಲ್, ಸರ್ವೋದಯ ಅಂತಾರಾಷ್ಟ್ರೀಯ ಟ್ರಸ್ಟಿ ಪಿ.ಎ.ನಝೀರತ್, ನ್ಯಾಷನಲ್ ಗ್ಯಾಲರಿ ಆಫ್ ಮಾಡರ್ನ್ ಆರ್ಟ್ ನಿರ್ದೇಶಕ ಶ್ರೀಮತಿ ನಝೀನಾ ಬಾನು, ರಾಜಭವನದ ಹಿರಿಯ ಅಧಿಕಾರಿ ಆರ್. ಪ್ರಭುಶಂಕರ್, ಕನ್ನಡ ಸಂಸ್ಕೃತಿ ಇಲಾಖೆಯ ನಿರ್ದೇಶಕ ಎಸ್.ರಂಗಪ್ಪ, ದೂರದರ್ಶನದ ದಕ್ಷಿಣ ಭಾರತದ ಮುಖ್ಯಸ್ಥರಾದ ವಿ.ರಮಾಕಾಂತ್, ಪ್ರಸಾರ ಭಾರತಿಯ ಎನ್. ಮಾಧವ್‌ರೆಡ್ಡಿ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಜಿ.ಜಗದೀಶ್ ಅವರು ಪಾಲ್ಗೊಳ್ಳಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

## ಅಬಕಾರಿ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ಅಬಕಾರಿ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವರಾದ ಕೆ.ಗೋಪಾಲಯ್ಯ ಅವರು ಅಕ್ಟೋಬರ್ 03 ಮತ್ತು 04 ರಂದು ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಕಾನೂನು ಸೇವೆಗಳ ಸಪ್ತಾಹ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನೇತೃತ್ವದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕಾನೂನು ಸೇವಾ ಸಂಸ್ಥೆಗಳು ಸಾಮಾನ್ಯ ನಾಗರೀಕರಲ್ಲಿ ಕಾನೂನು ಅರಿವು ಜಾಗೃತಿ ಮತ್ತು ಅವರ ಮನೆ ಬಾಗಿಲಿಗೆ ನ್ಯಾಯ ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಿವೆ.

75ನೇ ಸ್ವಾತಂತ್ರ್ಯ ಅಮೃತ ಮಹೋತ್ಸವದ ಅಂಗವಾಗಿ ದಿನಾಂಕ: 02-10-2021ರಿಂದ 14-11-2021ರ ವರೆಗೆ "ಅಜಾದಿ ಕಾ ಅಮೃತ ಮಹೋತ್ಸವ ಮತ್ತು ದಿನಾಂಕ: 08-11-2021ರಿಂದ 14-11-2021ರ ವರೆಗೆ ಕಾನೂನು ಸೇವೆಗಳ ಸಪ್ತಾಹದ ಅಂಗವಾಗಿ NALSA "Pan India Awareness and Outreach campaign" ಕಾರ್ಯಕ್ರಮವನ್ನು ದಿನಾಂಕ: 02-10-2021ರ ಬೆಳಿಗ್ಗೆ 11.00 ಗಂಟೆಗೆ ನವದೆಹಲಿಯ ವಿಜ್ಞಾನ ಭವನದ ಪ್ಲೆನರಿ ಹಾಲ್‌ನಲ್ಲಿ ಉದ್ಘಾಟಿಸಲಾಗುವುದು. ಈ ಕಾರ್ಯಕ್ರಮದಲ್ಲಿ ಗೌರವಾನ್ವಿತ ರಾಷ್ಟ್ರಪತಿಗಳು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದು, ಸರ್ವೋಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿಗಳು ಹಾಗೂ ಇತರೆ ಗಣ್ಯ ವ್ಯಕ್ತಿಗಳು ಉಪಸ್ಥಿತರಿರುತ್ತಾರೆ. ಈ ಕಾರ್ಯಕ್ರಮದ ನೇರ ಪ್ರಸಾರವನ್ನು http://www.youtube.com/watch?v=UQR9IJZQVWY ಲಿಂಕ್ ಮೂಲಕ ವೀಕ್ಷಿಸಬಹುದಾಗಿದೆ.

NALSA "Pan India Awareness and Outreach campaign" ಕಾರ್ಯಕ್ರಮವನ್ನು ಉದ್ಘಾಟಿಸಿದ ನಂತರ ರಾಜ್ಯದ ಎಲ್ಲಾ 03 ಉಚ್ಛ ನ್ಯಾಯಾಲಯದ ಕಾನೂನು ಸೇವೆಗಳ ಸಮಿತಿಗಳು 30 ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರಗಳು ಮತ್ತು 149 ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳು ಕರ್ನಾಟಕ ರಾಜ್ಯಾದ್ಯಂತ ಬೃಹತ್ ಕಾನೂನು ಸಾಕ್ಷರತಾ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿವೆ. ಈ ಅಭಿಯಾನಕ್ಕಾಗಿ ರಾಜ್ಯ ಪ್ರಾಧಿಕಾರವು ಕಾರ್ಯಕ್ರಮದ ಸಮಗ್ರ ಪಟ್ಟಿಯನ್ನು ತಯಾರಿಸಿದೆ. ಈ ಕಾರ್ಯಕ್ರಮದ ಅನುಸಾರ ರಾಜ್ಯದ ಎಲ್ಲಾ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳಲ್ಲಿ ಸುದೀರ್ಘ 43 ದಿನಗಳ ಅಭಿಯಾನದಲ್ಲಿ ದಿನಕ್ಕೆ ಒಂದು ಕಾನೂನು ಸಾಕ್ಷರತಾ ಕಾರ್ಯಕ್ರಮ ಮತ್ತು ಒಂದು ಕಾನೂನು ಸೇವೆಗಳ ಶಿಬಿರವನ್ನು ಆಯೋಜಿಸುತ್ತಿವೆ. ದಿನಾಂಕ: 08-11-2021 ರಿಂದ 14-11-2021ರ ವರೆಗಿನ ಕಾನೂನು ಸೇವೆಗಳ ಸಪ್ತಾಹದಲ್ಲಿ ಎಲ್ಲಾ ವಕೀಲರು ಸ್ಟೈಫಂಡ್ ವಕೀಲರು, ಕಾರಾಗೃಹ ಅಧಿಕಾರಿಗಳು ಮತ್ತು ಕಾನೂನು ಕಾಲೇಜುಗಳಲ್ಲಿ ಕಾನೂನು ಸೇವಾ ಕ್ಲಿನಿಕ್‌ಗಳಲ್ಲಿ ನ್ಯಾಯಾಲಯದಲ್ಲಿ ನೀಡಲಾಗುವ ಕಾನೂನು ನೆರವಿನ ಕುರಿತು ಜಾಗೃತಿ ಮೂಡಿಸಲು ಪ್ರಯತ್ನಿಸಲಾಗುವುದು.

ಇಂತಹ ಬೃಹತ್ NALSA "Pan India Awareness and Outreach campaign" ಕಾರ್ಯಕ್ರಮವನ್ನು ಸತತ 43 ದಿನಗಳ ಕಾಲ ನೆಡಸುವುದು ರಾಜ್ಯದ ಕಾನೂನು ಸೇವಾ ಸಂಸ್ಥೆಗಳಿಗೆ ನಿಜವಾದ ಸವಾಲಾಗಿದೆ. ಗೌರವಾನ್ವಿತ ನ್ಯಾಯಮೂರ್ತಿ ಶ್ರೀ ಅರವಿಂದ್ ಕುಮಾರ್, ನ್ಯಾಯಾಧೀಶರು, ಕರ್ನಾಟಕ ಉಚ್ಛ ನ್ಯಾಯಾಲಯ ಮತ್ತು ಕಾರ್ಯನಿರ್ವಾಹಕ ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಬೆಂಗಳೂರು ಇವರು ಈಗಾಗಲೇ ರಾಜ್ಯದ ಉನ್ನತ ಸರ್ಕಾರಿ ಅಧಿಕಾರಿಗಳು, ಕಾನೂನು ವಿಶ್ವವಿದ್ಯಾಲಯಗಳ ಉಪಕುಲಪತಿಗಳು, ರಾಜ್ಯದ ರಾಷ್ಟ್ರೀಯ ಸ್ವಯಂ ಸೇವಾ ಸಂಸ್ಥೆಯ ಮುಖ್ಯಸ್ಥರು, ಎಲ್ಲಾ ಜಿಲ್ಲೆಗಳ ಬಾರ್ ಅಸೋಸಿಯೇಷನ್ ಮತ್ತು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಪದಾಧಿಕಾರಿಗಳ ಜೊತೆ ಹಲವು ಸುತ್ತಿನ ಸಭೆಗಳನ್ನು ನಡೆಸಿರುತ್ತಾರೆ. ಈಗಾಗಲೇ ರಾಜ್ಯದ ಎಲ್ಲಾ ಕಾನೂನು ಸೇವಾ ಸಂಸ್ಥೆಗಳು ಸಾರ್ವಜನಿಕರಲ್ಲಿ ಕಾನೂನು ಅರಿವು ಮೂಡಿಸಲು ದೂರದ ಕುಗ್ರಾಮವನ್ನು ತಲುಪಲು ಹೆಚ್ಚಿನ ಪೂರ್ವಸಿದ್ದತಾ ಕಾರ್ಯವನ್ನು ಆರಂಭಿಸಿದೆ. ಈ ಅಭಿಯಾನದ ಯಶಸ್ಸಿಗೆ ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದ ಸಹಕಾರವನ್ನು ಸಹ ಬಹಳ ಅವಶ್ಯಕವಾಗಿರುತ್ತದೆ.

ಸದರಿ ಕಾರ್ಯಕ್ರಮಕ್ಕೆ ಗೌರವಾನ್ವಿತ ಶ್ರೀ ನ್ಯಾಯಮೂರ್ತಿ ಸತೀಶ್ ಚಂದ್ರ ಶರ್ಮಾ, ಹಂಗಾಮಿ ಮುಖ್ಯ ನ್ಯಾಯಮೂರ್ತಿ, ಕರ್ನಾಟಕ ಉಚ್ಛ ನ್ಯಾಯಾಲಯ ಮತ್ತು ಪ್ರಧಾನ ಪೋಷಕರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಗೌರವಾನ್ವಿತ ಶ್ರೀ ನ್ಯಾಯಮೂರ್ತಿ ಅರವಿಂದ ಕುಮಾರ್, ನ್ಯಾಯಾಧೀಶರು, ಕರ್ನಾಟಕ ಉಚ್ಛ ನ್ಯಾಯಾಲಯ ಮತ್ತು ಕಾರ್ಯನಿರ್ವಾಹಕ ಅಧ್ಯಕ್ಷರು, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರರವರು ರಾಜ್ಯದಲ್ಲಿ ಕಾರ್ಯನಿರ್ವಹಿಸುವ ಕರ್ನಾಟಕ ಉಚ್ಛ ನ್ಯಾಯಾಲಯ ಕಾನೂನು ಸೇವಾ ಸಮಿತಿಗಳು, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರಗಳು ಮತ್ತು ತಾಲ್ಲೂಕು ಕಾನೂನು ಸೇವೆಗಳ ಸಮಿತಿಗಳ ಎಲ್ಲಾ ನ್ಯಾಯಾಂಗ ಅಧಿಕಾರಿಗಳಿಗೆ, ಪ್ಯಾನಲ್ ವಕೀಲರುಗಳೀಗೆ, ಅರೆಕಾಲಿಕ ಸ್ವಯಂ ಸೇವಕರಿಗೆ, ಸರ್ಕಾರೇತರ ಸಂಸ್ಥೆಗಳ ಪದಾಧಿಕಾರಿಗಳಿಗೆ ಮತ್ತು ಸರ್ಕಾರದ ವಿವಿಧ ಇಲಾಖೆಗಳ ಮುಖ್ಯಸ್ಥರಿಗೆ ಶುಭ ಹಾರೈಕೆಯನ್ನು ತಿಳಿಸಿರುತ್ತಾರೆ.

## ವಸತಿ ಸಚಿವರ ಪ್ರವಾಸ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರಾದ ವಿ.ಸೋಮಣ್ಣ ಅವರು ಅಕ್ಟೋಬರ್ 5 ರಂದು ಮೈಸೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಆಗಮಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದ್ದಾರೆ.

## ಕೆಪಿಎಸ್‌ಸಿ: ಮೂಲದಾಖಲೆಗಳ ಪರಿಶೀಲನೆ ಮತ್ತು ಸಂದರ್ಶನ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

ಕರ್ನಾಟಕ ಲೋಕ ಸೇವಾ ಆಯೋಗವು ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆಯಲ್ಲಿನ 2017-18ನೇ ಸಾಲಿನ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಗ್ರೂಪ್ – 'ಎ' ವೃಂದದ 24 ಹುದ್ದೆಗಳ ನೇಮಕಾತಿಗೆ ಸಂಬಂಧಿಸಿದಂತೆ ಅರ್ಹ ಅಭ್ಯರ್ಥಿಗಳಿಗೆ ಅಕ್ಟೋಬರ್ 11 ರಿಂದ ಅಕ್ಟೋಬರ್ 13, 2021ರವರೆಗೆ ಮೂಲ ದಾಖಲೆಗಳ ಪರಿಶೀಲನೆ ಮತ್ತು ಸಂದರ್ಶನವನ್ನು ಆಯೋಗದ ಕೇಂದ್ರ ಕಚೇರಿ, ಬೆಂಗಳೂರಿನಲ್ಲಿ ನಡೆಸಲು ನಿಗದಿಪಡಿಸಿದೆ.

ಅರ್ಹ ಅಭ್ಯರ್ಥಿಗಳಿಗೆ ಈಗಾಗಲೇ ಸಂದರ್ಶನ ಸೂಚನಾ ಪತ್ರಗಳನ್ನು ಕಳುಹಿಸಲಾಗಿದೆ. ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಆಯೋಗದ ವೆಬ್‌ಸೈಟ್ ವಿಳಾಸ: http://kpsc.kar.nic.in/EligibilityList ನಲ್ಲಿ ಪ್ರಕಟಿಸಲಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

PHOTO CAPTION

Shri Shelley Salehin, Deputy High Commissioner of Bangladesh in Chennai called on Shri Thaawarchand Gehlot, Hon'ble Governor of Karnataka at Rajbhavan today.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯುಗುಣಮಟ್ಟ ಮಾಪನ ಕೇಂದ್ರಗಳ ವಾಯುಗುಣಮಟ್ಟ ಸೂಚ್ಯಂಕ

ಬೆಂಗಳೂರು, ಅಕ್ಟೋಬರ್ 01, (ಕರ್ನಾಟಕ ವಾರ್ತೆ) :

**ದಿನಾಂಕ: 1.10.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 50 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 54 | ತೃಪ್ತಿಕರ | CO |
| 3 | ಕವಿಕ, ಮೈಸೂರುರಸ್ತೆ | 84 | ತೃಪ್ತಿಕರ | CO |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 61 | ತೃಪ್ತಿಕರ | CO |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 100 | ತೃಪ್ತಿಕರ | CO |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 75 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 40 | ಉತ್ತಮ | CO |
| **(1.10.2021 at 10.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 63 | ತೃಪ್ತಿಕರ | $PM_{10}$ |

| | | | | |
|---|---|---|---|---|
| 9 | ಪೀಣ್ಯ | 66 | ತೃಪ್ತಿಕರ | $PM_{10}$ |
| 10 | ಬಿಟಿಎಂ ಲೇಔಟ್ | * | * | * |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 1.10.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 50 | Good | $PM_{10}$ |
| 2 | Jayanagar 5th Block, Shalini ground | 54 | Satisfactory | CO |
| 3 | KAVIKA, Mysore Road | 84 | Satisfactory | CO |
| 4 | Rajeev Gandhi Institute of Chest Disease, NIMHANS, Hombegowda Nagar | 61 | Satisfactory | CO |
| 5 | HSR Layout, near Central Silkboard | 100 | Satisfactory | CO |
| 6 | City Railway Station, Magestic, Bengaluru | 75 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 40 | Good | CO |
| **(1.10.2021 at 10.05 AM)** | | | | |
| 8 | BWSSB, Kadabesanahalli | 63 | Satisfactory | $PM_{10}$ |
| 9 | Peenya | 66 | Satisfactory | $PM_{10}$ |
| 10 | BTM Layout | * | * | * |

| Category (Range) | Possible Health Impacts | Category (Range) | Possible Health Impacts |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |